ಅಸಿಸ್ಟೆಂಟ್ ಕ್ಯಾನರ್‌ವೇಟರವರ ರೂಬರೂ ಬರುವ ಏಪ್ರೆಲ್ ಮಾಹೆ 10ನೇ ತಾರೀಖು ಶುಕ್ರವಾರ ದಿವಸ 11 ಘಂಟೆ ಲಾಗಾಯತು ಹರಾಜು ಮಾಡಿಸುತ್ತಾದ್ದರಿಂದ ಇಚ್ಛೆವುಳ್ಳವರು ಆ ಕಾಲಕ್ಕೆ ಹಾಜರಾಗಿ ಛಡದರಖಾಸ್ತು ಮಾಡಬಹುದಾಗಿರುತ್ತೆ.

ಹರಾಜಿನ ರೂಲ್ಸನ್ನು ಆ ಕಾಲದಲ್ಲಿ ಓದಿ ಹೇಳಲಾದೀತು ಐರ್ಜ್ ರೂಲ್ಸ್ ಪ್ರಕಾರವೇ ಮೇಲ್ಕಂಡ ಹರಾಜು ನಡಿಸಲ್ಪಡುವದು.

ಎಸ್. ಎ. ಬಾಪೂರಾವ್,
ಫಾರೆಸ್ಟ್ ಅಸಿಸ್ಟೆಂಟ್ ಕ್ಯಾನರ್‌ವೇಟರ್.

ಇಸ್ತಿಹಾರ್ ನಾಮೆ.

ತಾರೀಖು 24ನೇ ಮಾರ್ಚ್ ಸ್ನ 1896ನೇ ಇಸವಿ.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ,—ಕೋಲೂರು ತಾಲ್ಲೂಕು ದೊಡ್ಡಬಿಕ್ಕೋಡು ಗ್ರಾಮದಲ್ಲಿ ಇರುವ ಇದರಡಿ ನಮೂದು ಮಾಡಿರುವ ಜಮೀನಿಗೆ ಕಾಫೀ ಸಾಗುವಳಿಬಗ್ಯಾಗಿ ದರಖಾಸ್ತು ಬಂದಿರೋದರಿಂದ ಸ್ನ 1896ನೇ ಇಸವಿ ಮೇ ತಾರೀಖು 18ನೇ ಸೋಮವಾರ ಹಗಲು 11 ಘಂಟೆಗೆ ಹಾಸನ ಡಿಸ್ಟ್ರಿಕ್ಟ್ ಡೆಪ್ಯೂಟಿ ಕಮ್ಮಿಷನರ್ ಸಾಹೆಬರವರ ಮಂಜೂರಾತಿಗೆ ವಳಪಡಿಸಿ ಹಾಸನ ಡಿಸ್ಟ್ರಿಕ್ಟ್ ಜನರಲ್ ಅಸಿಸ್ಟೆಂಟ್ ಕಮ್ಮಿಷನರವರ ರೂಬರೂ ಬೇಲೂರು ವೊಕ್ಕಲ್ಲಿನಲ್ಲಿ ಬಹಿರಂಗವಾದ ಹರಾಜು ಮೂಲಕ ಅವುಗಳು ವಿಕ್ರಯಿಸಲ್ಪಡುವವು.

2. ಮಾಮೂಲ ಪರತ್ತುಗಳಿಗೆ ವಳಪಟ್ಟು ಬಹಿರಂಗವಾದ ಹರಾಜು ಮೂಲಕ ಸದರೀ ಲೀಲಾವ್ ನಡಿಯತಕ್ಕದ್ದು. ಎಕರೆ 1ಕ್ಕೆ 10 ರೂಪಾಯಿಗಳ ಮೇರೆ ಆಗುವ ಅಸ್ಸೆಟ್‌ಪೈಸ್ ಯಾನೆ ನಿಯಮವಾದ ಸರ್ಕಾರಿ ಸವಾಲಿಗೆ ಮೇಲ್ಪಟ್ಟು ಖಾಯಿಷ್ ಮಾಡುವ ಆಖೈರಿ ಛಡದರಖಾಸ್ತುದಾರನಿಗೆ ಮೂರು ವಾರಗಳಿಂದ ಜಮ್ಮಾ ಹರಾಜನ್ನು ಖೈದ್ ಮಾಡೋಣಾಗುತ್ತದೆ. ಹರಾಜಿನಲ್ಲಿ ಆ ಜಮ್ಮಾ ದರಖಾಸ್ತುದಾರನಿಗೆ ಆಗುವ ಪಕ್ಷದಲ್ಲಿ ಆತನಿಂದ ಹಾಜರಾಗಿರುವ ನಿಯಮವಾದ ಸರ್ಕಾರ್ ಸವಾಲ್ ಮೊಬಲಗು (ಅಸ್ಸೆಟ್ ಪೈಸ್) ಶೇಕಡಾ ಚವಥಾ ಹಿಸ್ಸೇ ಡಿಪಾಜಿಟ್ ಮೊಬಲಗನ್ನು ಹರಾಜು ಮೊಬಲಗಿನ ಮೇಲೆ ಶೇಕಡಾ 25 ರೂಪಾಯಿಗಳ ಮೇರೆ ಆಗುವ ಡಿಪಾಜಿಟ್ ಮೊಬಲಗು ಭರ್ತಿಗೆ ಜಮಾ ಹಿಡಿಯೋಣಾಗುತ್ತೆ. ಆದರೆ ಆ ಜಮೀನನ್ನು ಹರಾಜಿನಲ್ಲಿ ದರಖಾಸ್ತುದಾರನಲ್ಲದ ಇತರರ್ಯಾರಾದರೂ ಪಡದರೆ ದರಖಾಸ್ತುದಾರನ ಪುರೂ ಠೇವಣಿ ಮೊಬಲಗನ್ನು ವಾಪಸ್ ಮಾಡೋಣಾಗುತ್ತದೆ.

3. ಮೇಲ್ಕಂಡ ಅಸ್ಸೆಟ್‌ಪೈಸ್‌ಯಾನೆ ನಿಯಮವಾದ ಸರಕಾರ್ ಸವಾಲ್ ಮೊಬಲಗಿನಲ್ಲಿ ಸರ್ವೆ ಖರ್ಚು ಮೊಬಲಗು ಮತ್ತು ಸರಕಾರಕ್ಕೇನೇ ಯಾವಾಗಲೂ ಇಟ್ಟುಕೊಳ್ಳಲ್ಪಟ್ಟಿರುವ ಸಂದಲ್ ವಿನಹ ಬಾಕಿಯಲ್ಲಾ ಮನ್ನಾ ಜಾತಿ ಮರಗಳ ಮೇಲಿನ ಸರಕಾರದ ಹಕ್ಕು ಇವುಗಳು ಅಡಗಿರುತ್ತವೆ.

4. ಹರಾಜು ಮೊಬಲಗು ಪೈಕಿ ಶೇಕಡಾ 25 ರೂಪಾಯಿಗಳ ಮೇರೆ ಆಗುವ ಠೇವಣಿ ಮೊಬಲಗನ್ನು ಹರಾಜ್ ಖೈದಾದ ವಡನೆಯೇ 2ನೇ ವ್ಯಾರಾದಲ್ಲಿ ನಮೂದಾಗುವ ಸಂದರ್ಭಾನುಸಾರ ಪುರೂ ಡಿಪಾಜಿಟ್ ಮೊಬಲಗು ಭರ್ತಿಗೆ ವಳಪಟ್ಟು ಆಖೈರ್ ಛಡದರಖಾಸ್ತುದಾರ ಕೊಡತಕ್ಕದ್ದು. ಮತ್ತು ಬಾಕಿ ಹಣವನ್ನು ಜಾರಿಯಲ್ಲಿ ಇರುವ ನಿಬಂಧನೆಗಳಲ್ಲಿ ಯುಕ್ತವಾಗಿರುವಂತೆ ಹರಾಜಾದ ತಾರೀಖು ಲಾಗಾಯತು 15ನೇ ದಿವಸ ಸೂರ್ಯಾಸ್ತಮಯಕ್ಕೆ ಮುಂಚೆಯೇ ಆಖೈರ್ ಛಡದರಖಾಸ್ತುದಾರನು ಪಾವತಿ ಮಾಡತಕ್ಕದ್ದು. ಹಾಗೆ ಛಡದರಖಾಸ್ತುದಾರನು ಡಿಪಾಜಿಟ್ ಅಥವಾ ವಿಕ್ರಯದ ಬಾಕಿ ಮೊಬಲಗನ್ನು ಕೊಡದೆ ತಪ್ಪಿದರೆ ಖರ್ಚು ಜಾತಾ ಉಳಿಯುವ ಡಿಪಾಜಿಟ್ ಮೊಬಲಗನ್ನು ಸರಕಾರಕ್ಕೆ ದಂಡವಾಗಿ ತೆಗದುಕೊಂಡು ಅವನ ಖರ್ಚಿನಿಂದಲೂ ಅವನಿಗೆ ನಷ್ಟುಕರವಾಗಿಯೂ ಸದರೀ ಜಮ್ಮಾ ಪುನಃ ಹರಾಜ್ ಮಾಡಲ್ಪಡುವದು. ಎರಡನೇ ಹರಾಜಿನಲ್ಲಿ ಸಂಭವಿಸುವ ನಷ್ಟುಕ್ಕೆ ಆವನು ಗುರಿಯಾಗಿರಬೇಕು. ಆದರೆ ಜಾಸ್ತಿ ಏನಾದರೂ ಹುಟ್ಟಿದರೆ ಅದಕ್ಕೆ ಅವನಿಗೆ ಯಾವ ಹಕ್ಕೂ ಇರಲಾರದು. ದುಸರೇ ಹರಾಜಿನಲ್ಲಿ ಉತ್ಪತ್ತಿ ಆಗುವ ಮೊಬಲಗು ಮೊದಲು ಹರಾಜಿನ ಸವಾಲ್‌ಗಿಂತಾ ಕಮ್ಮಿಯಾಗುವ ಪಕ್ಷ ಕಮ್ಮಿ ಮೊಬಲಗನ್ನ ರವಿನ್ಯೂ ಬಾಕಿಯಂತೆ ಅವನಿಂದ ವಸೂಲ್ ಮಾಡಲ್ಪಡುತ್ತೆ.

5. ಈ ನಿಬಂಧನೆಗಳಿಗೆ ವಳಪಟ್ಟು ಹರಾಜಾದ ಜಮೀನನ್ನು ಪುರೂ ಮೂರು ಸಾಲ್ ಆಕಾರವಿಲ್ಲದೆ ಮುಫತ್ತು, 4ನೇ 5ನೇ ಸಾಲ್ ಅರ್ಧ ಆಕಾರ, 6ನೇ ಸಾಲ್ ಲಾಗಾಯತು ಮತ್ತೆ ಅನಂತರ ಸಹ ಪೂರಾ ಆಕಾರ ಈ ಮೇರೆ ಕೊಟ್ಟುಕೊಂಡು ಅನುಭವಿಸತಕ್ಕದ್ದು. ಈ ರಿಯಾಯತ್ತು ಕೊಡುವದಕ್ಕೆ ಮುಂಚೆ ಜಮೀನಿನಲ್ಲಿ ಇರುವ ಸಾಗುವಳಿ ಲಾಯಖ್ ಪ್ರದೇಶವನ್ನು ಸಾಗುವಳಿಗೆ ತರಲು ಪ್ರಾಮಾಣಿಕವಾದ ಪ್ರಯತ್ನ ಮಾಡದೆ ಅದರಲ್ಲಿ ಇರುವ ನಾಟುವನ್ನು ಕತ್ತರಾಯಿಸಿಕೊಂಡೇ ಆಗಲಿ ಅದರಲ್ಲಿ ಯಾವ ಭಾಗವನ್ನಾದರೂ ಬೈಲ್ ಮಾಡಿಯೇ ಆಗಲಿ ಸದರೀ ಜಮೀನಿಗೆ ರಿಯಾಯತ್ತಿ ಅವಧಿಯಲ್ಲಿ ರಾಜೀನಾಮೆ ಕೊಡುವ ಪಕ್ಷಕ್ಕೆ ಪುರೂಸಾಲ್ ಲಾಗಾಯತು ಪೂರಾ ಆಕಾರ ಕೊಡಲುಳ್ಳವನೆಂತ ಬರಹ ಮೂಲಕವಾಗಿ ಹರಾಜುದಾರನು ಮುಚ್ಚಳಿಕೆಯಿಂದ ಬದ್ಧನಾಗಬೇಕು.

6. ಈ ನಂಬರಿನಲ್ಲಿರುವ ಸುಮಾರು 1—2 ವಿಸ್ತೀರ್ಣದ ಯರೆಡು ದಾರಿಗಳು ಇವೆ, ಇವುಗಳನ್ನ ಹರಾಜಿನಲ್ಲಿ ಪಡಿಯುವ ಛಡದರಖಾಸ್ತುದಾರನು ಅಡ್ಡಿಪಡಿಸಕೂಡದು, ಅವುಗಳನ್ನ ಜನೋಪಯುಕ್ತಕ್ಕಾಗಿ ಉಳಿಸಿಕೊಂಡಿದೆ.

ಸರ್ವೆ ನಂಬರ್.	ದರಖಾಸ್ತುದಾರನ ಹೆಸರು.	ಜರ್ಮಿ ಹೆಸರು ಮತ್ತು ಇರತಕ್ಕ ಸ್ಥಳ.	ಚತುರ್ಹದ್ದು.	ದರಖಾಸ್ತು ಜರ್ಮಿಯನ್ನು ಸ್ವಾಧೀನ ಮಾಡಿಕೊಳ್ಳುವ ಬಗ್ಗೆ ಪ್ರಸಿದ್ಧ ಪಡಿಸಿದ ತಾರೀಖು.	ಷರಾ.
2ರ ಪೈಕಿ ಪ್ಲೋಟು ನಂಬರ್ 172	ಮೆಸ್ಟರ್ ಜೆ. ಜಿ. ಎಚ್ ಕ್ಯಾಫರ್ಡ್ಯಾಯವರು.	ದೊಡ್ಡಬಿಕ್ಕೋಡು ಗ್ರಾಮ.	ಉತ್ತರಕ್ಕೆ—ಸರ್ವೆ ನಂಬರು 7—8—9—10 ಮತ್ತು ಮಠ ದಕ್ಷಿಣಕ್ಕೆ—ಸರ್ವೆ 2ನೇ ನಂಬರು ಪೂರ್ವಕ್ಕೆ—ಸರ್ವೆ ನಂಬರು 88—1 ಪ್ಲೋಮಕ್ಕೆ—ಸರ್ವೆ 2ನೇ ನಂಬರು ಪೈಕಿ.	ನ. ಗಂ. 108—22 ಈ ನಂಬರಿನಲ್ಲಿ ಇದಾಗಲೇ ಜಾಸ್ತಿ	ಖಾಯಂದರ್—ಎಕರೆ 1 ಕ್ಕೆ 8—0—0 ಹಂಗಾಮಿ ದರ—ಡಿಟೋ 1—0—0 ಹೊರಾಜಿನಲ್ಲಿ ಪಡೆಯುವವರು ಸಿದ್ಧ ಪಡಿಸಿದ ದಾಯ ದಾಖಲಾಗಿ ಕೊಡಬೇಕು.

ತಿಳುವಳಿಕೆ ಷರಾ.—ಬಂದು ಸರ್ವೇ ನಂಬರು ಪೈಕಿ ಕೆಲವು ಜಾಗಾಕ್ಕೆ ದರಖಾಸ್ತು ಬಂದು ಇಚ್ಛಾ ಆಳತೆ ಪ್ರಕಾರ ಅಂದಾಜು ಎಕರೆ ಮೇಲೆ ಅಸ್ಸೆಸ್ಟ್‌ಮೆಂಟ್ ವಸೂಲಾದ್ದರಲ್ಲಿ ಕರಾರುವಾಕಾ ಮೋಜಣೀ ಎಕರಿಗೆ ಗಣನೀಯವಾದಷ್ಟು ಕಮ್ಮಿ ಜಾಸ್ತೀ ಆದರೆ ಜಾಸ್ತೀ ಎಕರೆ ಸಂಬಂಧ ಅಸ್ಸೆಸ್ಟ್‌ಮೆಂಟ್ ವಸೂಲೀ ಕೊಡುವದಕ್ಕೇ ಆಗಲಿ ಕಮ್ಮಿ ಎಕರೆ ಸಂಬಂಧ ವಾಪಸ್ ಪಡೆಯುವದಕ್ಕೇ ಆಗಲಿ ಜರ್ಮಿ ಹಿಡುವಳಿದಾರನು ಬದ್ಧ ವ ಅರ್ಹನಾಗಿರಬೇಕು.

ಎ. ಕೃಷ್ಣಸ್ವಾಮಯ್ಯಂಗಾರ್,
ಡೆಪ್ಯೂಟಿ ಕಮ್ಮಿಷನರ್.

ಕಡೂರು ಡಿಸ್ಟ್ರಿಕ್ಟ್.

ತಾರೀಖು 18ನೇ ಮಾರ್ಚಿ 1896.

ಸ್ಥಿರಸ್ವತ್ತಿನ ಹರಾಜ್ ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧ ಪತ್ರಿಕೆ.

1. ಕಂದಾಯದ ಬಾಕಿದಾರರಾದ ಡಾಕ್ಟರ್ ಸಿಡ್ನಿಸ್ಮಿತ್ ಸಾಹೆಬರು ಮತ್ತು ಬಿ. ಎ. ಬ್ರಿಟೊ ಜಂಟಿದಾರರಿಂದ ವಸೂಲ್ ಪಡೆಯಬೇಕಾದ ಜರ್ಮಿ ಕಂದಾಯದ ಬಾಕಿಗಾಗಿ ಇದರಡಿ ನಮೂದಾಗುವ ಸ್ಥಿರಸ್ವತ್ತು ಸರ್ಕಾರಕ್ಕೆ ದಂಡವಾಗಿ ಶೇರಿಸಿಕೊಂಡು ಇಧೆಯಂತ ಹುಕ್ಕುಂ ಮಾಡಲ್ಪಟ್ಟ ಕಡೂರು ಡಿಸ್ಟ್ರಿಕ್ಟ್ ಚಿಕ್ಕಮಗಳೂರು ತಾಲ್ಲೂಕು ಕಚೇರಿಯಲ್ಲಿ ತಾಲ್ಲೂಕು ಅಮಲ್‌ದಾರ್ ಯಾ ಶಿರಸ್ತೇದಾರ್ ರೂಬರೂ ಸನ್ 1896ನೇ ಇಸವಿ ಮೇ 15ನೇ ತಾರೀಖಿನಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧ ಪಡಿಸಲ್ಪಟ್ಟಿದೆ.

ಹರಾಜು ಆ ತಾರೀಖು ದಿವಿ 11 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕದಂ ಚಡದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1894–95ನೇ ಸಾಲಿಗೆ ಪೂರ್ತಿಯಾಗಿ ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಪ್ಶೀಲ್ ಮೇರಿಗೆ 288—1—1 ಮತ್ತು ಬಡ್ಡಿ ವಗೈರೆ ಇತರ ರೂಪಾಯಿ ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜುದಾರನು ಹರಾಜು ಮೊಬಲಗಿನ ಶೇಕಡಾ 25 ರೂಪಾಯಿಯನ್ನು ಡಿಪಾಜಿಟ್ಟು ಹಾಜರ್ಮಾಡಬೇಕಾಗಿರುತ್ತೆ. ಆದು ಜಾತಾ ಹರಾಜ್ ಬಾಬತು ಬಾಕಿ ಮೊಬಲಗು ಹರಾಜ್ ತಾರೀಖು ಲಾಗಾಯತು 15 ದಿವಸಗಳಲ್ಲಿ ಪಾವತಿ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ ಮೊಬಲಗನ್ನ ಹಾಜರ್ಮಾಡಿದವನು ಕಳದುಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕಿ ಮೊಬಲಗು ಪಾವತಿ ಮಾಡಲ್ಪಡದೆ ಹೋದಾಗ್ಯೆ, ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಃ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸವಾಲ್ ಮಾಡತಕ್ಕ ಜನಗಳು ಖುದ್ದು ತಮ್ಮ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೆಯೇ ಯಾ ಪಿಜಂಟ್ ಯಾ ಮುತಾಲೀಕರಾಗಿ ಸವಾಲ್ ಮಾಡುತ್ತಾರೆಯೇ ಎಂಬ ಅಂಶವನ್ನ ತಿಳಿಸಬೇಕೆಂತಲೂ, ಇತರರಿಗೋಸ್ಕರ ಮುತಾಲೀಕರಾಗಿ ಸವಾಲ್ ಮಾಡುವ ಸಂದರ್ಭದಲ್ಲಿ ಅಂಥಾ ತಮ್ಮ ಯಜಮಾನರಿಂದ ಸಹಿ ಮಾಡಲ್ಪಟ್ಟು ಲಿಖಿತವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡುವಂತೆಯೂ ಕೇಳಲ್ಪಡಬಹುದು. ಅದನ್ನ ಅವರು ಹಾಜರ್ಮಾಡದೆ ಹೋದಲ್ಲಿ ಅವರ ಸವಾಲುಗಳು ತಿರಸ್ಕರಿಸಲ್ಪಡಬಹುದು.

6. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕಿದಾರನಾಗಲಿ ಆತನ ತರಫಿನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲಿ ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.